ದಿನಾಂಕಃ **16.04.2026** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ  ಶ್ರೀ ಎಂ ಬಿ ವಕೀಲರಿಂದಃ-

ನನ್ನ ಮುಖ್ಯ ವಿಚಾರಣಾ ಪ್ರಮಾಣಪತ್ರವನ್ನು ಯಾರು ಬರೆಯಿಸಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಅದನ್ನು ನನಗೆ ಓದಿ ಹೇಳಿರುವುದಿಲ್ಲ.   ವಾದಿಯು ಯಾವ ದಾವೆಯನ್ನು ಹೂಡಿರುತ್ತಾರೆ ಎಂದರೆ ಸಾಕ್ಷಿ ಹೊಲದ ಮೇಲೆ ಕೇಸು ಹಾಕಿರುತ್ತಾರೆ ಎಂದು ನುಡಿಯುತ್ತಾರೆ.   ಜಮೀನಿನ ಸರ್ವೆ ನಂಬರ್ ನನಗೆ ಗೊತ್ತಿಲ್ಲ. ದಾವಾ ಆಸ್ತಿ 2 ಎಕರೆ ಇರುತ್ತದೆ.   ಪ್ರತಿವಾದಿಯ ಆಸ್ತಿಯ ಸರ್ವೆ ನಂಬರ್ ಮತ್ತು ವಿಸ್ತೀರ್ಣ ನನಗೆ ಗೊತ್ತಿಲ್ಲ. ಸರ್ವೆ ನಂ 213 ರಲ್ಲಿ ವಾದಿಯ ಜಮೀನು ಇದ್ದು ಪ್ರತಿವಾದಿಯ ಯಾವುದೇ ಜಮೀನು ಇಲ್ಲಾ ಎಂದರೆ ನನಗೆ ಗೊತ್ತಿಲ್ಲ.  ದಾವಾ ಆಸ್ತಿಯನ್ನು ವಾದಿ ಉಳುಮೆ ಮಾಡುತ್ತಿದ್ದಾರೆ ಎಂದರೆ ಸರಿ.

ಪ್ರಶ್ನೆಃ ಪ್ರತಿವಾದಿಗೆ ಸರ್ವೆ ನಂ 213 ರಲ್ಲಿ ಯಾವುದೇ ಜಮೀನು ಇಲ್ಲಾ

ಉತ್ತರಃ ಇಲ್ಲಾ ಎಂದರೆ ನಾನು ಏನು ಮಾಡಲಾಗುತ್ತದೆ.

ಪ್ರತಿವಾದಿಯ ಯಾವುದೇ ಜಮೀನು ಇಲ್ಲದಿದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ  ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.